ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಹಾಗೂ ರಾಜೇಶ್ವರಗಳಲ್ಲಿ ಉರ್ದು ಮಾಧ್ಯಮದ ಪ್ರೌಢಶಾಲೆಗಳನ್ನು ತೆರೆಯುವುದು

2581(2955) ಶ್ರೀ ಎಂ.ಜಿ ಮುಳೆ *(ಬಸವಕಲ್ಯಾಣ)* :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಗೆ ಬರುವ ಮಂಠಾಳ ಹಾಗೂ ರಾಜೇಶ್ವರ ಗ್ರಾಮಗಳಲ್ಲಿ ಉರ್ದು ಪ್ರಾಥಮಿಕ ಶಾಲೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) 1ರಿಂದ 7ನೇ ತರಗತಿಯವರೆಗೆ ಪ್ರಾಥಮಿಕ ಶಾಲೆ ಇದ್ದು ಪ್ರೌಢಶಾಲೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಮಂಠಾಳ ಗ್ರಾಮದಲ್ಲಿ ಉರ್ದು ಪ್ರೌಢಶಾಲೆ ಸ್ಥಾಪಿಸಲು ಕೈಗೊಂಡಿರುವ ಕ್ರಮವೇನು; ಹಾಗೂ ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಹೌದು

ಇ) ಸರ್ಕಾರದ ಆದೇಶ ಸಂಖ್ಯೆ ಇಡಿ 67 ಎಸ್‌ಇಎಸ್ 2001 ರ ದಿನಾಂಕ 10-7-2001ರಲ್ಲಿ ಈಗಾಗಲೇ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಪ್ರಾರಂಭಿಸಲು ಅನುಮತಿ ನೀಡಲಾಗಿದೆ.

ಹುಣಸೂರು ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ

2582(3358) ಶ್ರೀ ಪಾಪಣ್ಣ ವಿ. (ಹುಣಸೂರು) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕಿನಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 72 ವಿವಿಧ ದರ್ಜೆ ಹುದ್ದೆಗಳು ಖಾಲಿ ಇರುವುದು ಸರ್ಕಾರಕ್ಕೆ ತಿಳಿದಿದೆಯೇ?

ಆ) ಹಾಗಿದಲ್ಲಿ, ಈ ಹುದ್ದೆಗಳನ್ನು ತುಂಬಲು ಏನು ಕ್ರಮ ತೆಗೆದುಕೊಂಡಿದೆ; ಖಾಲಿ ಇರುವ ಹುದ್ದೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೆ?

F-26-51